# ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ
## ರಾಜ್ಯ ಯೋಜನಾ ನಿರ್ದೇಶಕರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳ ಪೂರಕ ಕಟ್ಟಡ,
## ನೃಪತುಂಗ ರಸ್ತೆ, ಬೆಂಗಳೂರು-01.

ಸಂಖ್ಯೆ:-ಆರ್.ಎಮ್.ಎಸ್.ಎ/ಆ.ವಿ/ಸಿ.ಎ.ಸಿ/01/2012-13 ದಿನಾಂಕ:-12-06-2012

ಗೆ,

ಉಪನಿರ್ದೇಶಕರು(ಆಡಳಿತ)

ಸಾರ್ವಜನಿಕ ಶಿಕ್ಷಣ ಇಲಾಖೆ

--------------ಜಿಲ್ಲೆ

ಮಾನ್ಯರೇ,

ವಿಷಯ: 2012-13 ನೇ ಸಾಲಿನಲ್ಲಿ ಆದರ್ಶ ವಿದ್ಯಾಲಯಗಳ 6 ನೇ ತರಗತಿಗೆ ದಾಖಲಾತಿ ಮಾಡಿಕೊಳ್ಳಲು ದಿನಾಂಕ ವಿಸ್ತರಿಸುವ ಬಗ್ಗೆ.

ಉಲ್ಲೇಖ:-ಆರ್.ಎಮ್.ಎಸ್.ಎ/ಆವಿ/ದಾಖಲಾತಿ/05/2011-12, ದಿನಾಂಕ: 05-05-2012.

2012-13 ನೇ ಸಾಲಿನಲ್ಲಿ ಆದರ್ಶ ವಿದ್ಯಾಲಯಗಳ 6 ನೇ ತರಗತಿಗೆ ವಿದ್ಯಾರ್ಥಿಗಳ ದಾಖಲಾತಿ ಸಂಬಂಧ ಆಯ್ಕೆ ಪರೀಕ್ಷೆ ನಡೆಸಿ ವಿದ್ಯಾರ್ಥಿಗಳ ಅರ್ಹತಾ ಪಟ್ಟಿಯನ್ನು ಸಿದ್ಧಪಡಿಸಲಾಗಿದೆ, ಇದರೊಂದಿಗೆ ಮೊದಲ 80 ವಿದ್ಯಾರ್ಥಿಗಳ ಆಯ್ಕೆ ಪಟ್ಟಿಯನ್ನು ನೀಡಲಾಗಿದೆ. ದಾಖಲಾತಿ ಮಾಡಲು ಅನುಸರಿಸಬೇಕಾದ ಕ್ರಮಗಳನ್ನು ನೀಡಿ ದಿನಾಂಕ: 10-06-2012 ರವರೆಗೆ ದಾಖಲಾತಿ ಮಾಡಿಕೊಳ್ಳಲು ಸೂಚಿಸಲಾಗಿತ್ತು.

10-06-2012 ರವರೆಗೆ ನಿಗದಿತ ಸಂಖ್ಯೆಯಲ್ಲಿ ಮಕ್ಕಳು ದಾಖಲಾಗದೆ ಸೀಟುಗಳ ಉಳಿಕೆ ಇರುವುದನ್ನು ತುಂಬಿಕೊಳ್ಳುವ ಬಗ್ಗೆ ತಾಲ್ಲೂಕುಗಳಿಂದ ಕೋರಿಕೆ ಬರುತ್ತಿರುತ್ತದೆ. ಈ ಸಂಬಂಧ ಈಗಾಗಲೇ ಕೇಂದ್ರೀಯ ದಾಖಲಾತಿ ಘಟಕದಿಂದ ನೀಡಲಾಗಿರುವ ಅರ್ಹತಾಪಟ್ಟಿಯ (ELIGIBILITY LIST) ಆಧಾರದ ಮೇಲೆ ರಾಜ್ಯದ ರೋಸ್ಟರ್ (ಮೀಸಲಾತಿ) ನಿಯಮವನ್ನು ಅನುಸರಿಸಿ ದಾಖಲಾತಿ ಮಾಡಿಕೊಳ್ಳಲು ದಿನಾಂಕ 30-06-2012 ರವರೆಗೆ ಅವಧಿ ವಿಸ್ತರಿಸಲಾಗಿದೆ. ಈ ಬಗ್ಗೆ ಅಗತ್ಯ ಕ್ರಮ ವಹಿಸಲು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಚಿಸಲು ತಿಳಿಸಿದೆ.

ತಮ್ಮ ನಂಬುಗೆಯ

ನಿರ್ದೇಶಕರು

ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ

12/6/12

ಗೌರವಪೂರ್ವಕವಾಗಿ ಮಾಹಿತಿಗಾಗಿ

1. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿ ಕಟ್ಟಡ ಬೆಂಗಳೂರುರವರಿಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ರವರಿಗೆ ಸಲ್ಲಿಸಿದೆ.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಧಾರವಾಡ ಮತ್ತು ಗುಲ್ಬರ್ಗಾ ರವರಿಗೆ ಸಲ್ಲಿಸಿದೆ.

ಸೂಕ್ತ ಕ್ರಮಕ್ಕಾಗಿ ಪ್ರತಿಯನ್ನು

1. ಸಂಬಂಧಿಸಿದ ಉಪಯೋಜನಾ ಸಮನ್ವಯಾಧಿಕಾರಿಗಳು, ಆರ್.ಎಂ.ಎಸ್.ಎ
2. ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾ.ಶಿ.ಇ
3. ಸಂಬಂಧಿಸಿದ ಆದರ್ಶ ವಿದ್ಯಾಲಯ ಶಾಲೆಯ ಮುಖ್ಯೋಪಾಧ್ಯಾಯರುಗಳಿಗೆ
4. ಕಛೇರಿ ಪ್ರತಿ